**Akashvani : Bangalore**
**Regional Bulletin In Kannada**
**05.10.2024 / 18.40 hrs**

ಆಕಾಶವಾಣಿ ಬೆಂಗಳೂರು
ಪ್ರದೇಶ ಸಮಾಚಾರ

ಮುಖ್ಯಾಂಶಗಳು

**೧. ರಾಯಚೂರಿನ ಮಾನ್ವಿಯಲ್ಲಿಂದು ೪೫೮ ಕೋಟಿ ರೂಪಾಯಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಚಾಲನೆ**

**೨. ಸೈಬರ್ ಅಪರಾಧ ತಡೆಗಟ್ಟಲು ಸೆನ್ ಠಾಣೆಗಳಿಗೆ ಎಸ್.ಪಿ. ದರ್ಜೆಯ ಅಧಿಕಾರಿಗಳ ನೇಮಕ - ಸಚಿವ ಡಾ. ಜಿ. ಪರಮೇಶ್ವರ್**

**೩. ರಾಜ್ಯ ಸರ್ಕಾರ ರೈತರ ಪರ ; ಕೃಷಿ ಕ್ಷೇತ್ರದ ಸುಧಾರಣೆಗೆ ಹೆಚ್ಚಿನ ಆದ್ಯತೆ - ಸಚಿವ ಎನ್. ಚಲುವರಾಯಸ್ವಾಮಿ**

**೪. ಬಗರ್‌ಹುಕುಂ ಅರ್ಜಿಗಳ ವಿಲೇವಾರಿಗಾಗಿ ತಹಶೀಲ್ದಾರರಿಗೆ ೨ ತಿಂಗಳು ಗಡುವು ನೀಡಿದ ಕಂದಾಯ ಸಚಿವ ಕೃಷ್ಣ ಭೈರೇಗೌಡ**

**<><*<><>*><>**

ರಾಯಚೂರು ಪ್ರವಾಸದಲ್ಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ ಇಂದು ಮಾನ್ವಿಯಲ್ಲಿ ೪೫೮ ಕೋಟಿ ರೂಪಾಯಿ ಮೌಲ್ಯದ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಿದರು. ಬಳಿಕ ನಡೆದ ಸಮಾವೇಶದಲ್ಲಿ ಮಾತನಾಡಿದ ಅವರು, ರಾಜ್ಯದ ಬೊಕ್ಕಸ ಖಾಲಿಯಾಗಿದ್ದು, ಅಭಿವೃದ್ಧಿ ಕಾರ್ಯಗಳಿಗೆ ಹಣವಿಲ್ಲ ಎಂದು ಬಿಜೆಪಿ ಅಪ ಪ್ರಚಾರ ಮಾಡುತ್ತಿದೆ. ತಮ್ಮ ಅಭಿವೃದ್ಧಿ ಕಾರ್ಯಕ್ರಮಗಳು ಕುರಿತು ವಿರೋಧ ಪಕ್ಷಗಳು ಅಪ ಪ್ರಚಾರ ಮಾಡುತ್ತಿದ್ದಾರೆ ಎಂದು ಟೀಕಿಸಿದರು. ಸಮರ್ಪಕ ಕಾರಣವಿಲ್ಲದೇ ಪ್ರತಿಪಕ್ಷಗಳು ರಾಜೀನಾಮೆ ನೀಡಲು ಆಗ್ರಹಿಸುತ್ತಿದ್ದಾರೆ. ತಮಗೆ ಬೇಸರವಾಗಿದ್ದರೂ ರಾಜ್ಯದ ಜನತೆಗಾಗಿ ಹೋರಾಟ ಮುಂದುವರೆಸಿ, ಕಲ್ಯಾಣ ಕರ್ನಾಟಕದ ೭ ಜಿಲ್ಲೆಗಳ ಅಭಿವೃದ್ಧಿಗೆ ಬದ್ಧರಾಗಿದ್ದೇವೆ. ಅವರ ಬೆದರಿಕೆಗಳಿಗೆ ಅಂಜುವುದಿಲ್ಲ ಎಂದರು.

**<><*<><>*><>**

ಮುಖ್ಯಮಂತ್ರಿ ಬದಲಾವಣೆ ಕುರಿತು ಯಾವುದೇ ಚರ್ಚೆ ಇಲ್ಲ. ಎಐಸಿಸಿ ಅಧ್ಯಕ್ಷರು ನಮ್ಮ ರಾಜ್ಯದವರೆ ಆಗಿದ್ದು, ಅವರನ್ನು ಭೇಟಿಯಾಗಿರುವುದಕ್ಕೆ ವಿಶೇಷ ಅರ್ಥ ಕಲ್ಪಿಸುವ ಅಗತ್ಯವಿಲ್ಲ ಎಂದು ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ತಿಳಿಸಿದ್ದಾರೆ. ವಿ.ಆರ್ ಸುದರ್ಶನ್ ಅವರ ನೇತೃತ್ವದ ಸತ್ಯಶೋಧನಾ ಸಮಿತಿ ವರದಿ ಸ್ವೀಕರಿಸಿದ ಬಳಿಕ ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಅವರು, ಲೋಕಸಭೆ ಚುನಾವಣೆ ಸೋಲು, ಗೆಲುವಿನ ಬಗ್ಗೆ ಪರಾಮರ್ಶೆ ನಡೆಸಲು ಸತ್ಯಶೋಧನಾ ಸಮಿತಿ ರಚಿಸಲಾಗಿದೆ. ವಿ.ಆರ್ ಸುದರ್ಶನ್ ಅವರ ನೇತೃತ್ವದ ಸಮಿತಿ ಹಾಸನ, ಮಂಡ್ಯ, ಮೈಸೂರು, ಕೊಡಗು ಜಿಲ್ಲೆಗಳ ಪ್ರವಾಸ ಮಾಡಿ ವರದಿ ಸಲ್ಲಿಸಿದ್ದಾರೆ. ಈ ವರದಿಯನ್ನು ಅಧ್ಯಯನ ಮಾಡಿ ಹಾಗೂ ರಾಜ್ಯದ ಎಲ್ಲಾ ವಲಯಗಳ ವರದಿ ಸೇರಿಸಿ, ಚರ್ಚಿಸಲಾಗುವುದು ಎಂದು ತಿಳಿಸಿದರು.

**<><*<><>*><>**

ಹೆಚ್ಚುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟಲು ಈಗಾಗಲೇ ಅಸ್ತಿತ್ವದಲ್ಲಿರುವ ಸೆನ್ ಠಾಣೆಗಳಿಗೆ ಎಸ್.ಪಿ. ರ‍್ಯಾಂಕ್‌ನ ಅಧಿಕಾರಿಗಳನ್ನು ನೇಮಿಸಲಾಗುವುದೆಂದು ಗೃಹ ಸಚಿವ ಡಾ. ಜಿ. ಪರಮೇಶ್ವರ ತಿಳಿಸಿದ್ದಾರೆ. ಧಾರವಾಡದ ರಾಷ್ಟ್ರೀಯ ವಿಧಿ-ವಿಜ್ಞಾನ ಸಂಸ್ಥೆಯ ವಿವಿಧ ವಿಭಾಗಗಳಿಗೆ ಹಾಗೂ ಪ್ರಯೋಗಾಲಯಗಳಿಗೆ ಭೇಟಿ ನಂತರ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಿನೇ ದಿನೇ ಸೈಬರ್ ಅಪರಾಧಗಳು ಎಲ್ಲೆಡೆ ಹೆಚ್ಚುತ್ತಿವೆ. ಈ ಹಿನ್ನಲೆಯಲ್ಲಿ ಆಧುನಿಕ ಅಪರಾಧ ತನಿಖೆಗಳಿಗೆ ತಕ್ಕಂತೆ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ತರಬೇತಿ ನೀಡಲಾಗುವುದು ಯಾವುದೇ ಸೈಬರ್ ಅಪರಾಧವಾದರೆ ಹೊಸ ಕಾನೂನುಗಳನ್ವಯ ತನಿಖೆ ನಡೆಸಬೇಕಾಗುತ್ತದೆ ಎಂದರು. ಪ್ರತಿ ಜಿಲ್ಲೆಗೊಂದರಂತೆ ರಾಜ್ಯದಲ್ಲಿ ಒಟ್ಟು ೪೩ ಸೆನ್ ಪೊಲೀಸ್ ಠಾಣೆಗಳಿದ್ದು, ಸದ್ಯ ಡಿವೈಎಸ್ಪಿ ಅಧಿಕಾರಿಗಳು ಇರುತ್ತಾರೆ. ಮುಂದಿನ ದಿನಗಳಲ್ಲಿ ಎಸ್.ಪಿ ರ‍್ಯಾಂಕ್ ಅಧಿಕಾರಿಗಳನ್ನು ನೇಮಿಸಲಾಗುವುದೆಂದು ತಿಳಿಸಿದರು. ಗುಜರಾತನಲ್ಲಿ ಸೈಬರ್ ವಿಶ್ವ ವಿದ್ಯಾಲಯ ನಿರ್ಮಿಸಲಾಗಿದ್ದು ವಿವಿಧ ದೇಶಗಳಿಂದ ಬಂದು ತರಬೇತಿ ಪಡೆಯುತ್ತಿದ್ದಾರೆ. ಇದರ ಭಾಗವಾಗಿ ಧಾರವಾಡದಲ್ಲಿ ವಿಧಿ ವಿಜ್ಞಾನ ಸಂಸ್ಥೆ ಸ್ಥಾಪಿಸಲಾಗಿದ್ದು ರಾಜ್ಯದ ಪೊಲೀಸ್ ಇಲಾಖೆಗೆ ಆಧುನಿಕ ವಿಧಿ ವಿಜ್ಞಾನ ಅತೀ ಹೆಚ್ಚು ಮಹತ್ವ ಪಡೆದುಕೊಳ್ಳಲಿದೆ ಎಂದರು.

ನಂತರ ವಿಧಿ ವಿಜ್ಞಾನ ಸಂಸ್ಥೆಯ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡಿದ ಸಚಿವರು, ಇಲ್ಲಿ ತರಬೇತಿ ಪಡೆಯುವ ವಿದ್ಯಾರ್ಥಿಗಳಿಗೆ ಬರುವ ದಿನಗಳಲ್ಲಿ ವಿಪುಲ ಅವಕಾಶಗಳಿವೆ ಸೈಬರ್ ಫಾರೆನ್ಸಿಕ್‌ಗಳು, ಸೈಬರ್ ಕಮಾಂಡೋಗಳು, ಸೈಬರ್ ತಜ್ಞರನ್ನು ತಯಾರಿ ಮಾಡುವಲ್ಲಿ ವಿಧಿ ವಿಜ್ಞಾನ ಸಂಸ್ಥೆಯು ಬಹು ಮುಖ್ಯ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು.

**<><*<><>*><>**

ತಮ್ಮದು ಜನಸಾಮಾನ್ಯರ ಹಾಗೂ ರೈತರ ಪರವಾದ ಸರ್ಕಾರವಾಗಿದ್ದು ಕೃಷಿ ಕ್ಷೇತ್ರದ ಸುಧಾರಣೆಗೆ ಹೆಚ್ಚಿನ ಆದ್ಯತೆ ನೀಡಲಾಗುತ್ತಿದೆ ಎಂದು ಕೃಷಿ ಸಚಿವ ಎನ್. ಚಲುವರಾಯಸ್ವಾಮಿ ತಿಳಿಸಿದ್ದಾರೆ. ಮೈಸೂರಿನಲ್ಲಿ ಏರ್ಪಡಿಸಿರುವ ರೈತ ದಸರಾ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಕೃಷಿ ಕ್ಷೇತ್ರದಲ್ಲಿ ಯಾಂತ್ರೀಕರಣದ ಪರಿಣಾಮಕಾರಿ ಅಳವಡಿಕೆ ಅಗತ್ಯವಿದೆ. ಕೃಷಿ ಇಲಾಖೆ ವತಿಯಿಂದ ಕಳೆದ ಸಾಲಿನಲ್ಲಿ ೧ ಸಾವಿರ ಕೋಟಿ ರೂಪಾಯಿ ವೆಚ್ಚದಲ್ಲಿ ಕೃಷಿ ಯಂತ್ರೋಪಕರಣಗಳನ್ನು ವಿತರಣೆ ಮಾಡಲಾಗಿದೆ ಎಂದರು. ಕೃಷಿ ಲಾಭದಾಯಕವಾಗಿಸುವುದೇ ರಾಜ್ಯ ಸರ್ಕಾರದ ಧ್ಯೇಯವಾಗಿದೆ. ಅದಕ್ಕಾಗಿ ಕೃಷಿ, ಪಶು ಸಂಗೋಪನೆ, ತೋಟಗಾರಿಗೆ ರೇಷ್ಮೆ ಎಲ್ಲವನ್ನೂ ಒಟ್ಟುಗೂಡಿಸಿ ಯೋಜನೆಗಳನ್ನು ಅನುಷ್ಠಾನ ಮಾಡಲಾಗುತ್ತಿದೆ. ಕೃಷಿಕರ ಆದಾಯದಲ್ಲಿ ವೃದ್ಧಿಯಾಗಬೇಕು ವೈಜ್ಞಾನಿಕ ಬೆಲೆ ದೊರೆಯುವ ಜೊತೆಗೆ ಸರ್ವ ಋತು ವರಮಾನ ಬರುವಂತೆ ಬೇಸಾಯ ಪದ್ಧತಿ ಅಳವಡಿಕೆಯಾಗಬೇಕಿದೆ. ಕೃಷಿಕರು ಸಮಗ್ರ ಬೇಸಾಯಕ್ಕೆ ಆದ್ಯತೆ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ರೈತ ಸಾಧಕರನ್ನು ಸನ್ಮಾನಿಸಲಾಯಿತು.

**<><*<><>*><>**

ಅಧಿಕಾರಿಗಳು ಬಗರ್ ಹುಕುಂ ಅರ್ಜಿಗಳ ವಿಲೇವಾರಿಗೆ ಆಸಕ್ತಿ ತೋರದಿದ್ದರೆ, ಕಾನೂನುಕ್ರಮ ಎದುರಿಸಬೇಕಾಗುತ್ತದೆ ಎಂದು ಕಂದಾಯ ಸಚಿವ ಕೃಷ್ಣ ಭೈರೇಗೌಡ ಎಚ್ಚರಿಸಿದ್ದಾರೆ.

ವಿಧಾನಸೌಧದಲ್ಲಿಂದು ರಾಜ್ಯದ ಎಲ್ಲಾ ತಹಶೀಲ್ದಾರ್ ಹಾಗೂ ಉಪ ವಿಭಾಗಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಭೆ ನಡೆಸಿ ಮಾತನಾಡಿದ ಅವರು, ಬಗರ್‌ಹುಕುಂ ಅರ್ಜಿವಿಲೇವಾರಿಗೆ ತಹಶೀಲ್ದಾರರಿಗೆ ೨ ತಿಂಗಳ ಗಡುವು ನೀಡಲಾಗಿದೆ. ಅರ್ಹ ರೈತರಿಗೆ ಮುಂದಿನ ವಾರದಲ್ಲಿ ಭೂ-ಮಂಜೂರಾತಿ ನೀಡುವಂತೆ ಸೂಚನೆ ನೀಡಲಾಗಿದೆ. ಈ ಸಂಬಂಧ ಸಕಾರಾತ್ಮಕವಾಗಿ ಕಾರ್ಯ ನಿರ್ವಹಿಸದ ತಹಶೀಲ್ದಾರ್ ಅಥವಾ ಅಧಿಕಾರಿಗಳ ವಿರುದ್ಧ ಕಾನೂನು ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದ್ದಾರೆ.

<><*<><>*><>

೨೦೨೫-೨೬ನೇ ಸಾಲಿನ ಮಹಾತ್ಮಾ ಗಾಂಧಿ ನರೇಗಾ ಯೋಜನೆಯ ಕಾರ್ಮಿಕ ಆಯ-ವ್ಯಯ ತಯಾರಿಕೆಯ ಕುರಿತು ಕೊಪ್ಪಳದ ಓಜನಹಳ್ಳಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ "ಉದ್ಯೋಗ ಖಾತರಿ ನಡಿಗೆ, ಸಬಲತೆಯಡೆಗೆ ಅಭಿಯಾನ ನಡೆಯಿತು. ಮನೆ ಮನೆ ಭೇಟಿ ನೀಡಿದ ಸಂದರ್ಭದಲ್ಲಿ ಮಾತನಾಡಿದ ಜಿಲ್ಲಾ ಐಇಸಿ ಸಂಯೋಜಕ ಶ್ರೀನಿವಾಸ ಚಿತ್ರಗಾರ, ಮನ್ರೇಗಾ ಯೋಜನೆಯು ಗ್ರಾಮೀಣ ಪ್ರದೇಶದ ರೈತರ, ಕೂಲಿಕಾರರ, ಮಹಿಳೆಯರ ಸಬಲೀಕರಣಕ್ಕಾಗಿ ಜಾರಿಯಾದ ಯೋಜನೆಯಾಗಿದೆ ಎಂದರು.

<><*<><>*><>

ತುಮಕೂರು ರೈಲ್ವೆ ನಿಲ್ದಾಣವನ್ನು ವಿಮಾನ ನಿಲ್ದಾಣ ಮಾದರಿಯಲ್ಲಿ ಅತ್ಯಾಧುನಿಕ ಸೌಲಭ್ಯಗಳೊಂದಿಗೆ ಮೇಲ್ದರ್ಜೆಗೇರಿಸಲು ಕೇಂದ್ರ ರೈಲ್ವೆ ಸಚಿವಾಲಯ ೮೮.೪೧ ಕೋಟಿ ರೂಪಾಯಿ ಅನುದಾನ ಬಿಡುಗಡೆ ಮಾಡಿದೆ ಎಂದು ಕೇಂದ್ರ ರೈಲ್ವೆ ಜಲಶಕ್ತಿ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಬೆಂಗಳೂರಿನಂತೆ ತುಮಕೂರು ಕೂಡ ಅತಿವೇಗವಾಗಿ ಬೆಳೆಯುತ್ತಿದ್ದು, ಸಾಮಾನ್ಯ ರೈಲ್ವೆ ಪ್ರಯಾಣಿಕರಿಗೂ ವಿಶ್ವ ದರ್ಜೆಯ ಸೌಲಭ್ಯಗಳು ಸಿಗಬೇಕೆಂಬ ಭವಿಷ್ಯದ ಸಾರಿಗೆ ವ್ಯವಸ್ಥೆಯನ್ನು ಮನಗಂಡು ತುಮಕೂರು ರೈಲ್ವೆ ನಿಲ್ದಾಣವನ್ನು ಸಿದ್ದಗಂಗಾ ಮಠದ ಮಾದರಿಯ ವಾಸ್ತುಶಿಲ್ಪದ ವಿನ್ಯಾಸದಲ್ಲಿ ನಿರ್ಮಿಸಲಾಗುವುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

<><*<><>*><>

ಕೇಂದ್ರ ರೈಲ್ವೆ, ಮಾಹಿತಿ ಮತ್ತು ಪ್ರಸಾರ, ಎಲೆಕ್ಟ್ರಾನಿಕ್ಸ್ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್, ಅವರಿಂದು ಬೆಂಗಳೂರಿನ ಕಂಟೋನ್ಮೆಂಟ್ ರೈಲು ನಿಲ್ದಾಣಕ್ಕೆ ಆಗಮಿಸಿ ನಿಲ್ದಾಣ ಉನ್ನತೀಕರಣಗೊಳಿಸುವ ಕುರಿತು ಸಮೀಕ್ಷೆ ನಡೆಸಿದರು. ಬಳಿಕ ಅವರು, ಖಾಸಗಿ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಲಿದ್ದು, ವಿವಿಧ ನವೋದ್ಯಮಗಳ ಪ್ರತಿನಿಧಿಗಳಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

<><*<><>*><>

ಸಹಕಾರಿ ಸಂಸ್ಥೆಗಳು ನಷ್ಟದಲ್ಲಿದ್ದರೂ ಸಹ ರೈತರಿಗೆ ಅನುಕೂಲವಾಗಲಿ ಎಂದು ಸಾಲ ನೀಡುತ್ತಾ ಬಂದಿವೆ. ಕೃಷಿ ಚಟುವಟಿಕೆಗಳು ನಿರಂತರವಾಗಿ ನಡೆಯಲಿ ಎಂಬ ಸದುದ್ದೇಶದೊಂದಿಗೆ ಸಹಕಾರಿ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿವೆ ಎಂದು ಸಹಕಾರ ಸಚಿವ ಕೆಎನ್ ರಾಜಣ್ಣ ತಿಳಿಸಿದ್ದಾರೆ. ವಿಜಯನಗರದ ಹೊಸಪೇಟೆಯಲ್ಲಿಂದು ರೈತ ಕ್ಷೇಮಾಭಿವೃದ್ಧಿ ಸಂಘದ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಶೂನ್ಯ ಬಡ್ಡಿ ದರದಲ್ಲಿ ಸಹಕಾರಿ ಬ್ಯಾಂಕುಗಳು ರೈತರಿಗೆ ಸಾಲ ನೀಡುತ್ತವೆ.

ಕೇವಲ ಅದರ ಬಡ್ಡಿಯನ್ನು ಸರ್ಕಾರ ಭರಿಸುತ್ತದೆ. ೨೦೨೨-೨೩ನೇ ಸಾಲಿನಲ್ಲಿ ಶೇಕಡ ೫.೮೬ ರಷ್ಟು ಬಡ್ಡಿ ನಿಗದಿಯಾಗಿತ್ತು. ಆದರೆ ೨೦೨೩-೨೪ನೇ ಸಾಲಿನ ಬಡ್ಡಿದರ ಇನ್ನೂ ನಿಗದಿಯಾಗಿಲ್ಲ ಆದ್ದರಿಂದ ಶೂನ್ಯ ಬಡ್ಡಿ ದರದಲ್ಲಿ ಸಾಲ ನೀಡಲು ಆಗುತ್ತಿಲ್ಲ ಎಂದರು.

**<><*<><>*><>**

ಇನ್ನು ಹವಾವರ್ತಮಾನ,

ದಕ್ಷಿಣ ಒಳನಾಡಿನಲ್ಲಿ ನೈಋತ್ಯ ಮುಂಗಾರು ಚುರಕಾಗಿತ್ತು. ಕರಾವಳಿ ಹಾಗೂ ಉತ್ತರ ಒಳನಾಡಿನಲ್ಲಿ ಸಾಮಾನ್ಯವಾಗಿತ್ತು. ದಕ್ಷಿಣ ಒಳನಾಡಿನ ಬಹುತೇಕ ಸ್ಥಳಗಳಲ್ಲಿ ಮಳೆಯಾಗಿದ್ದು, ಕರಾವಳಿಯ ಹಲವು, ಉತ್ತರ ಒಳನಾಡಿನ ಕೆಲವು ಸ್ಥಳಗಳಲ್ಲಿ ಮಳೆಯಾಗಿದೆ. ಇನ್ನು ರಾಜ್ಯದ ಹವಾಮಾನ ಮುನ್ಸೂಚನೆ ಕುರಿತು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್. ಪಾಟೀಲ್ ಆಕಾಶವಾಣಿಗೆ ಹೆಚ್ಚಿನ ಮಾಹಿತಿ ನೀಡಿದ್ದಾರೆ.

**<><*<><>*><>**

ಮೈಸೂರು ದಸರಾ ಮಹೋತ್ಸವದ ಅಂಗವಾಗಿ ನಗರದ ಜೆ.ಕೆ. ಮೈದಾನದಲ್ಲಿ  ಮೀನುಗಾರಿಕೆ ಇಲಾಖೆ ಮತ್ತು ಜಿಲ್ಲಾಡಳಿತದ ಸಹಯೋಗದಲ್ಲಿ ಆಯೋಜಿಸಲಾಗಿದ್ದ ಮತ್ಸ್ಯ ಮೇಳಕ್ಕೆ ಕೃಷಿ ಸಚಿವ ಎನ್. ಚೆಲುವರಾಯ ಸ್ವಾಮಿ ಚಾಲನೆ ನೀಡಿದರು. ಮೈಸೂರು ಭಾಗದಲ್ಲಿ ಈವರೆಗೆ ನೋಡಲು ಸಾಧ್ಯವಾಗದ ಅಪರೂಪದ ಮೀನುಗಳು, ಬಣ್ಣದ ಅಲಂಕಾರಿಕ ಮೀನುಗಳ ಪ್ರದರ್ಶನ, ಟನಲ್ ಅಕ್ವೇರಿಯಂ ಮೇಳದ ಮುಖ್ಯ ಆಕರ್ಷಣೆಯಾಗಿದೆ. ಮೇಳದಲ್ಲಿ ಗೋಲ್ಡ್ ಫಿಶ್, ಫೈಟರ್, ಆರೋವನ, ಫ್ಲವರ್‌ಹಾರ್ನ್, ಏಂಜಲ್ ಫಿಶ್, ಮುಂತಾದ ಅಲಂಕಾರಿಕ ಹಾಗೂ ಲಾಭದಾಯಕ ಮೀನು ಸಾಕಾಣಿಕೆ ಕುರಿತ ಮಾಹಿತಿ ಸರಣಿ ಸಾರ್ವಜನಿಕರ ಗಮನ ಸೆಳೆಯಿತು.

**<><*<> ಇಲ್ಲಿಗೆ ವಾರ್ತಾ ಪ್ರಸಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**